**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 72/2020**

| | | |
|---|---|---|
| ಸಾಕ್ಷಿದಾರರ ಹೆಸರು | - ಭೀಮರಾಜು | **ಚಾ.ಸಾ.-1** |
| ತಂದೆಯ ಹೆಸರು | - ಲೇಟ್ ಕರಿಯಣ್ಣ | **ಫ್ರಾ.ಸಾ.-1** |
| ವಯಸ್ಸು | - 40 ವರ್ಷ | |
| ಉದ್ಯೋಗ | - ವ್ಯವಸಾಯ | |
| ವಾಸ ಸ್ಥಳ | - ಹರಿಯಬ್ಬೆ | |

ದಿನಾಂಕಃ 23.11.2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಚಾ.ಸಾ. 2 ರಿಂದ 4 ರವರ ಪರಿಯವಿರುತ್ತದೆ. ಆರೋಪಿತರ ಪರಿಚಯ ಇದೆ. ಆರೋಪಿತರು ನನಗೆ ಮತ್ತು ಚಾ.ಸಾ, 2 ರಿಂದ 4 ರವರಿಗೆ ಕೊಲೆ ಬೆದರಿಕೆ ಹಾಕಿಲ್ಲ, ನಮ್ಮನ್ನು ಮುಂದೆ ಹೋಗದಂತೆ ಅಡ್ಡಗಟ್ಟಿ ನಿಲ್ಲಿಸಿಲ್ಲ, ನಾವು ಕೆಲಸ ಮಾಡುತ್ತಿದ್ದ ಸ್ಥಳಕ್ಕೆ ಅತಿಕ್ರಮ ಪ್ರವೇಶ ಮಾಡಿಲ್ಲ. ಆರೋಪಿತರು ಯಾವುದೇ ನಷ್ಟವನ್ನುಂಟುಮಾಡಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ, ಸದರೀ ದಾಖಲೆ ದೂರಾಗಿದ್ದು, ಅದನ್ನು ನಿ.ಪಿ. 1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 1 ಎ ಎಂದು ಗುರುತಿಸಲಾಯಿತು. ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ, ಸದರೀ ದಾಖಲೆ ಸ್ಥಳ ಮಹಜರ್ ಆಗಿದ್ದು, ಅದನ್ನು ನಿ.ಪಿ. 2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.2 ಎ ಎಂದು ಗುರುತಿಸಲಾಯಿತು. ನಿ.ಪಿ. 1 ಮತ್ತು 2 ರಲ್ಲಿ ಪೋಲೀಸರು ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ. ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನಿ.ಪಿ. 2 ದಾಖಲೆಗೆ ನನ್ನನ್ನು ಹೊುತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಮಹಜರ್ ಕ್ರಮವನ್ನು ಜರುಗಿಸಿಲ್ಲ. ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದಃ</u>**

ದಿನಾಂಕಃ 08.05.2017 ರಂದು, ಮಧ್ಯಾಹ್ನ 01.15 ಗಂಟೆ ಸಮಯದಲ್ಲಿ ಮದ್ದೂರು ತಾಲ್ಲೂಕು ಬಿ ಹೊಸಹಳ್ಳಿ ಗ್ರಾಮದ ಸ.ನಂ. 29 ರಲ್ಲಿ ಹೊಸದಾಗಿ ಕರ್ನಾಟಕ ಸರ್ಕಾರದ ವಸತಿ ಶಿಕ್ಷಣ ಇಲಾಖೆಯ ವತಿಯಿಂದ ನಿರ್ಮಿಸಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಾಮಗಾರಿಯ ಉಸ್ತುವಾರಿಯನ್ನು ನೀವು ನೋಡಿಕೊಳ್ಳುತ್ತಿದ್ದಾಗ, ಸದರೀ ವಸತಿ ಶಾಲೆಯ ಸುತ್ತಲೂ ಗುರುತು ಮಾಡಿರುವ ಜಾಗದಲ್ಲಿ ಕಾಂಪೌಂಡ್ ನಿರ್ಮಿಸುತ್ತಿದ್ದಾಗ ಈ ಪ್ರಕರಣದ ಆರೋಪಿತರು ಅಕ್ರಮವಾಗಿ ಗುಂಪು ಕಟ್ಟಿಕೊಂಡು ನೀವು ಮತ್ತು ಚಾ.ಸಾ. 2 ರಿಂದ 4 ರವರು ಕೆಲಸ ಮಾಡುತ್ತಿದ್ದ ಸ್ಥಳಕ್ಕೆ ಪ್ರವೇಶ ಮಾಡಿ, ನಿಮ್ಮ ಕೆಲಸಕ್ಕೆ ಅಡ್ಡಿಪಡಿಸಿ, ನಿಮಗೆ ಮತ್ತು ಚಾ.ಸಾ. 2 ರಿಂದ 4 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ನಂತರ ಆರೋಪಿತರು ಮಾರ್ಕಿಂಗ್ ಗೋಡೆಯನ್ನು ಹೊಡೆದು ಹಾಕಿ ಸುಮಾರು 2 ಲಕ್ಷ ರೂ.ಗಳಷ್ಟು ನಷ್ಟ ಉಂಟು ಮಾಡಿರುತ್ತಾರೆಂದರೆ ಸರಿಯಲ್ಲ. ನೀವು ಈ ಘಟನೆಯನ್ನು ಕುರಿತು ನಿ.ಪಿ. 1 ರಂತೆ ಅದೇ ದಿನ ರಾತ್ರಿ 08.00 ಗಂಟೆಯ ಸಮಯದಲ್ಲಿ ಮದ್ದೂರು ಪೋಲೀಸರಿಗೆ ದೂರನ್ನು ನೀಡಿರುತ್ತೀರಿಎಂದರೆ ಸರಿಯಲ್ಲ, ನೀವು ದೂರು ನೀಡಿದ ನಂತರ ದಿನಾಂಕಃ 09.05.2017 ರಂದು ಬೆಳಗ್ಗೆ 11.00 ರಿಂದ ಮಧ್ಯಾಹ್ನ 12.00 ಗಂಟೆಯವರೆಗೆ ನೀವು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ಚಾ,ಸಾ, 5 ಮತ್ತು 6 ರವರ ಸಮಕ್ಷಮ ನಿ.ಪಿ. 2 ರಂತೆ ಮಹಜರ್ ಕ್ರಮ ಜರುಗಿಸಿಎರಡು ಇಟ್ಟಿಗೆ ಚೂರುಗಳು ಮತ್ತು ಎರಡು ಸಿಮೆಂಟ್ ಚೂರುಗಳನ್ನು ಅಮಾನತ್ತುಪಡಿಸಿ ಕೊಂಡಿರುತ್ತಾರೆಂದರೆ ಸರಿಯಲ್ಲ. ನೀವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜೀ ಮಾಡಿಕೊಂಡಿರುತ್ತೀರಿ ಎಂದರೆ ಸರಿ. ಆದ ಕಾರಣ ನಿ.ಪಿ. 1 ಮತ್ತು 2 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ನಿಮಗೆ ಗೊತ್ತಿದ್ದರೂ ಸಹ ಅರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಏನೂ ಇಲ್ಲ.</u>**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ, ಮದ್ದೂರು.

ಸಾಕ್ಷಿ ಸಹಿ